# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

23

ಇಲಾಖೆ / ವಿಷಯ : DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 1/4/21

# ಪೊಲೀಸ್ ತನಿಖೆಗೆ ಹೈಕೋರ್ಟ್ ಅಸ್ತು

**ಬೆಂಗಳೂರು:** ದೇವರಬೀಸನಹಳ್ಳಿ, ಬೆಳ್ಳಂದೂರು ಹಾಗೂ ಮತದಹಳ್ಳಿ ಅಕ್ರಮ ಡಿನೋಟಿಫಿಕೇಷನ್ ಪ್ರಕರಣಗಳಲ್ಲಿ ಈಗಾಗಲೇ ಹೈಕೋರ್ಟ್‌ನಲ್ಲಿ ಕಾನೂನು ಹಿನ್ನಡೆ ಅನುಭವಿಸಿದ್ದ ಸಿಎಂ ಯಡಿಯೂರಪ್ಪನವರಿಗೆ ಮತ್ತೊಂದು ಹಿನ್ನಡೆಯಾಗಿದೆ.



ಕಾಂಗ್ರೆಸ್ –ಜೆಡಿಎಸ್ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಮೈತ್ರಿ ಸರ್ಕಾರ ಪತನಗೊಳಿಸಿ ಬಿಜೆಪಿ ಸರ್ಕಾರ ರಚಿಸಲು ನಡೆಸಿದ ಆಪರೇಷನ್ ಕಮಲಕ್ಕೆ ಗುರುಮಿಠಕಲ್ ಜೆಡಿಎಸ್ ಶಾಸಕ ನಾಗನಗೌಡ ಕಂದಕೂರು ಅವರಿಗೆ ದೊಡ್ಡ ಮೊತ್ತದ ಹಣದ ಆಮಿಷ ಒಡ್ಡಿದ್ದ ಆರೋಪ ಪ್ರಕರಣದಲ್ಲಿ ಸಿಎಂ ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದ ಎಫ್‌ಐಆರ್‌ಗೆ ನೀಡಲಾಗಿದ್ದ ಮಧ್ಯಂತರ ತಡೆಯಾಜ್ಞೆಯನ್ನು ತೆರವುಗೊಳಿಸಿ ಆದೇಶ ನೀಡಿರುವ ಹೈಕೋರ್ಟ್, ಪೊಲೀಸರ ತನಿಖೆಗೆ ಅಸ್ತು ಎಂದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ರಾಯಚೂರು ಜಿಲ್ಲೆ ದೇವದುರ್ಗ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಎಫ್‌ಐಆರ್‌ಗೆ ನೀಡಲಾಗಿದ್ದ ಮಧ್ಯಂತರ ತಡೆಯಾಜ್ಞೆ ತೆರವುಗೊಳಿಸುವಂತೆ ಕೋರಿ ದೂರುದಾರ ಹಾಗೂ ಶಾಸಕ ನಾಗನಗೌಡ ಕಂದಕೂರು ಅವರ ಪುತ್ರ ಶರಣಗೌಡ ಕಂದಕೂರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕ ಸದಸ್ಯ ನ್ಯಾಯಪೀಠ, ಎಫ್‌ಐಆರ್‌ಗೆ ನೀಡಲಾಗಿದ್ದ ಮಧ್ಯಂತರ ತಡೆಯಾಜ್ಞೆಯನ್ನು ತೆರವುಗೊಳಿಸಿ ಆದೇಶಿಸಿದೆ.

ಅಲ್ಲದೇ, ಪ್ರಕರಣದಲ್ಲಿ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ವಿಚಾರಣೆ ನಡೆಸಬಹುದಾದ ಅಂಶಗಳು ಮೇಲ್ನೋಟಕ್ಕೆ ಕಂಡು ಬರುತ್ತಿರುವ ಹಿನ್ನೆಲೆಯಲ್ಲಿ ಕಾನೂನು ರೀತಿ ಮುಂದಿನ ತನಿಖೆ ನಡೆಸುವಂತೆ ದೇವದುರ್ಗ ಠಾಣಾ ಪೊಲೀಸರಿಗೆ ಹೈಕೋರ್ಟ್ ನಿರ್ದೇಶನ ನೀಡಿದೆ. ಇದರಿಂದ ತನಿಖೆಗೆ ಪೊಲೀಸರಿಗೆ ಇದ್ದ ಅಡ್ಡಿ ನಿವಾರಣೆಯಾಗಿದ್ದು, ಯಡಿಯೂರಪ್ಪ ಅವರಿಗೆ ಸಂಕಷ್ಟ ಎದುರಾಗಿದೆ. ಜೊತೆಗೆ, ಮಾಜಿ ಪತ್ರಕರ್ತ ಎಂ.ಬಿ. ಮರಮಕಲ್ ಅವರೂ ವಿಚಾರಣೆ ಎದುರಿಸಬೇಕಾಗಿದೆ. ಅರ್ಜಿದಾರರ ಪರ ಪಿ. ವಿಲಾಸ ಕುಮಾರ್ ಮಾರ್ತಾಂಡರಾವ್ ವಕಾಲತ್ತು ವಹಿಸಿದ್ದರು. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾದಗಿರಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್‌ಗೆ ಸಂಬಂಧಿಸಿದಂತೆ ಇತ್ತೀಚೆಗೆ ಯಡಿಯೂರಪ್ಪ ಅವರಿಗೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

1/4/21

## ಸುಪ್ರೀಂ ಮೆಟ್ಟಿಲೇರಲು ನಿರ್ಧಾರ

ಹೈಕೋರ್ಟ್ ಆದೇಶದ ಕುರಿತು ಮುಖ್ಯಮಂತ್ರಿ ಕಚೇರಿಯಿಂದ ಪ್ರಕಟಣೆ ಹೊರಡಿಸಲಾಗಿದ್ದು, ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂಕೋರ್ಟ್ ಮೊರೆ ಹೋಗುವುದಾಗಿ ತಿಳಿಸಲಾಗಿದೆ.

ಎಫ್ಐಆರ್ ರದ್ದುಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಪಿಎಂ ಪಾಟೀಲ್ ಅವರಿದ್ದ ನ್ಯಾಯಪೀಠ, ಎಫ್ಐಆರ್ ಹಾಗೂ ಮುಂದಿನ ತನಿಖೆಗೆ ತಡೆ ನೀಡಿತ್ತು. ತಡೆಯಾಜ್ಞೆ ತೆರವುಗೊಳಿಸಲು ಮನವಿ ಮಾಡಿ ತನಿಖೆ ನಡೆಸುತ್ತಿರುವ ಪೊಲೀಸರು ಅರ್ಜಿ ಸಲ್ಲಿಸಬೇಕು. ಆದರೆ, ಇಲ್ಲಿ ದೂರುದಾರರು ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣಾ ಮಾನ್ಯತೆ ಕುರಿತು ವಾದ ಮಂಡಿಸುವುದಾಗಿ ತಿಳಿಸಿದ್ದರೂ, ನ್ಯಾಯಪೀಠ ನಮ್ಮ ವಾದವನ್ನು ಆಲಿಸದೇ ಮಧ್ಯಂತರ ಅರ್ಜಿಯನ್ನು ಮೆರಿಟ್ ಮೇಲೆ ಪರಿಗಣಿಸಿ ಆದೇಶ ಹೊರಡಿಸಿದೆ. ಈ ಹಿಂದೆ ಮೇಲ್ನೋಟಕ್ಕೆ ಆರೋಪಗಳನ್ನು ಸಾಬೀತುಪಡಿಸುವ ಅಂಶಗಳಿಲ್ಲ ಎಂಬ ಕಾರಣದಿಂದಲೇ ತನಿಖೆಗೆ ತಡೆಯಾಜ್ಞೆ ನೀಡಲಾಗಿತ್ತು. ಈಗ ಆ ಆದೇಶಕ್ಕೆ ತದ್ವಿರುದ್ಧವಾಗಿ ತನಿಖೆ ಮುಂದುವರಿಸಲು ಆದೇಶಿಸಲಾಗಿದೆ. ಇದನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಲಾಗುವುದು ಎಂದು ಯಡಿಯೂರಪ್ಪ ಪರ ವಕೀಲ ಸಂದೀಪ್ ಪಾಟೀಲ್ ತಿಳಿಸಿದ್ದಾರೆ.

## ಬಿಎಸ್‌ವೈಗೆ ಇತ್ತೀಚಿನ ಕಾನೂನು ಹಿನ್ನಡೆ

- ನಗರದ ಗಂಗೇನಹಳ್ಳಿಯ ಮತದಹಳ್ಳಿ ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ವಶಪಡಿಸಿಕೊಂಡಿದ್ದ 1 ಎಕರೆ 11 ಗುಂಟೆ ಜಮೀನನ್ನು ಅಕ್ರಮ ಡಿ–ನೋಟಿಫಿಕೇಷನ್ ಮಾಡಿದ ಆರೋಪ ಸಂಬಂಧ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಲೋಕಾಯುಕ್ತ ಪೊಲೀಸರು ದಾಖಲಿಸಿರುವ ಎಫ್ಐಆರ್ ರದ್ದುಪಡಿಸಲು ಹೈಕೋರ್ಟ್ ಇತ್ತೀಚೆಗೆ ನಿರಾಕರಿಸಿತ್ತು.
- ಬೆಂಗಳೂರಿನ ಬೆಳ್ಳಂದೂರು ಹಾಗೂ ದೇವರಬೀಸನಹಳ್ಳಿಯಲ್ಲಿ ಐಟಿ ಕಾರಿಡಾರ್‌ಗಾಗಿ ಕೆಐಎಡಿಬಿ ವಶಪಡಿಸಿಕೊಂಡಿದ್ದ ಜಮೀನನ್ನು ಅಕ್ರಮವಾಗಿ ಡಿ–ನೋಟಿಫಿಕೇಷನ್ ಮಾಡಿದ ಆರೋಪ ಸಂಬಂಧ ಯಡಿಯೂರಪ್ಪ ವಿರುದ್ಧ ಲೋಕಾಯುಕ್ತ ಪೊಲೀಸರು 2015ರಲ್ಲಿ ದಾಖಲಿಸಿದ್ದ ಎಫ್ಐಆರ್ ಹಾಗೂ ಪ್ರಕರಣ ಕುರಿತ ಲೋಕಾಯುಕ್ತ ಕೋರ್ಟ್‌ನಲ್ಲಿ ನಡೆಯುತ್ತಿರುವ ವಿಚಾರಣೆಯನ್ನು ರದ್ದುಪಡಿಸಲು ನಿರಾಕರಿಸಿದ್ದ ಹೈಕೋರ್ಟ್, 25 ಸಾವಿರ ರೂ. ದಂಡ ಸಹ ವಿಧಿಸಿತ್ತು.